Fax: 08282-256262
E-mail:kuvempuacademic@gmail.com

Phone No - 08282-256149
Website: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

**ಶೈಕ್ಷಣಿಕ ವಿಭಾಗ,** ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ,
ಜ್ಞಾನಸಹ್ಯಾದ್ರಿ, ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

ಸಂಖ್ಯೆ:ಕುವಿ:ಶೈವಿ:ಎಸಿ–4(184): 2174 :2026–27 ದಿನಾಂಕ:29–08–2026

## ಸುತ್ತೋಲೆ-1

**ವಿಷಯ: 2026–27ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿ ಪ್ರವೇಶಾತಿಯಲ್ಲಿ ರಿಕ್ತ ಸ್ಥಾನಗಳನ್ನು ಭರ್ತಿ ಮಾಡುವ ಕುರಿತು.**

ಉಲ್ಲೇಖ:
1. ಈ ಕಛೇರಿ ಅಧಿಸೂಚನೆ ಸಂಖ್ಯೆ:ಕುವಿ:ಶೈವಿ:ಎಸಿ–4:184 :1102:2026–27, ದಿನಾಂಕ:29–06–2026.
2. ಈ ಕಛೇರಿ ಪರಿಷ್ಕೃತ ಅಧಿಸೂಚನೆ ಸಂಖ್ಯೆ:ಕುವಿ:ಶೈವಿ:ಎಸಿ–4:184:1488:2026–27, ದಿನಾಂಕ:18–07–2026.
3. ಈ ಕಛೇರಿ ಪರಿಷ್ಕೃತ ಅಧಿಸೂಚನೆ-1ರ ಸಂಖ್ಯೆ:ಕುವಿ:ಶೈವಿ:ಎಸಿ–4:184:1494:2026–27, ದಿನಾಂಕ:20–07–2026.
4. ವಿ.ವಿ. ಸುತ್ತೋಲೆ ಸಂಖ್ಯೆ:ಕುವಿ:ಶೈವಿ:ಎಸಿ–4:184:1895:2026–27, ದಿನಾಂಕ:13–08–2026.
5. ದಿನಾಂಕ:27–08–2026ರಂದು ನಡೆದ ಡೀನರು/ವಿಭಾಗಾಧ್ಯಕ್ಷರುಗಳ ಸಭೆಯ ನಿರ್ಣಯ.

*****

ವಿಶ್ವವಿದ್ಯಾಲಯದ 2026–27ನೇ ಸಾಲಿನ ಪ್ರಥಮ ವರ್ಷದ ಸ್ನಾತಕೋತ್ತರ ಪ್ರವೇಶಾತಿಗೆ ಸಂಬಂಧಿಸಿದಂತೆ ಉಲ್ಲೇಖಿತ(1), (2) ಮತ್ತು (3)ರಲ್ಲಿ ಅಧಿಸೂಚನೆಗಳನ್ನು ಹೊರಡಿಸಲಾಗಿದ್ದು, ಪ್ರವೇಶಾತಿ ಕೌನ್ಸಿಲಿಂಗ್ ಪ್ರಕ್ರಿಯೆಗಳನ್ನು **ದಿನಾಂಕ:13–08–2026 ಮತ್ತು 14–08–2026ರಂದು** ಆಯಾ ಸ್ನಾತಕೋತ್ತರ ವಿಭಾಗಗಳಲ್ಲಿ ಈಗಾಗಲೇ ಮುಗಿದಿರುತ್ತದೆ. ಮುಂದುವರೆದಂತೆ, ಉಲ್ಲೇಖಿತ (4)ರ ಸುತ್ತೋಲೆಯಲ್ಲಿ ರಿಕ್ತ ಸ್ಥಾನಗಳನ್ನು ಭರ್ತಿ ಮಾಶಡಿಕೊಳ್ಳಲು ದಿನಾಂಕ:31–08–2026ರವರೆಗೆ ವಿಸ್ತರಿಸಲಾಗಿತ್ತು.

ಆದರೆ ಕೆಲವು ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ನಿಗದಿತ ಮೆರಿಟ್ ಕೋಟಾದಡಿ ಪ್ರವೇಶಮಿತಿ ಭರ್ತಿಯಾಗದಿರುವ ಕುರಿತು ವಿಭಾಗಾಧ್ಯಕ್ಷರುಗಳು ಮೌಖಿಕವಾಗಿ ಉಲ್ಲೇಖಿತ (5)ರ ಸಭೆಯಲ್ಲಿ ಕೋರಿರುವ ಹಿನ್ನೆಲೆಯಲ್ಲಿ, ಸದರಿ ಸಭೆಯ ನಿರ್ಣಯದನ್ವಯ ಹಾಗೂ ಮಾನ್ಯ ಕುಲಪತಿಗಳ ಮೌಖಿಕ ಆದೇಶದ ಮೇರೆಗೆ ಖಾಲಿ ಉಳಿದಿರುವ ವಿಭಾಗ ಹಾಗೂ ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸಂಯೋಜಿತ ಕಾಲೇಜುಗಳಲ್ಲಿ ಖಾಲಿ ಉಳಿದಿರುವ ಸೀಟ್‌ಗಳಿಗೆ ಸೀಟ್ ಮ್ಯಾಟ್ರಿಕ್ಸ್‌ನಲ್ಲಿ ನಿಗದಿಪಡಿಸಿರುವ ಪ್ರವೇಶಮಿತಿಗೊಳಪಟ್ಟು ದಿನಾಂಕ:07–09–2026ರವರೆಗೆ ವಿಸ್ತರಿಸಿ, ಪ್ರವೇಶಾತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.

ಉಳಿದಂತೆ ಉಲ್ಲೇಖಿತ (4)ರ ಸುತ್ತೋಲೆಯಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ-577 451.
ಶಿವಮೊಗ್ಗ ಜಿಲ್ಲೆ.

ಗೆ,

01. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರು/ ಸಂಯೋಜನಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
02. ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಶಿವಮೊಗ್ಗ/ ಚಿಕ್ಕಮಗಳೂರು ಜಿಲ್ಲೆಯ ಎಲ್ಲಾ ಸ್ನಾತಕೋತ್ತರ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ

ಪ್ರತಿಗಳು:

1. ಆಪ್ತ ಸಹಾಯಕರು, ಕುಲಪತಿಗಳು: ಕುಲಸಚಿವರು: ಕುಲಸಚಿವರು(ಪ): ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ಕಛೇರಿ ಪ್ರತಿ.